ಸಾಕ್ಷಿಗೆ ಕ್ರಮಬದ್ಧವಾಗಿ ಪ್ರಮಾಣ ವಚನವನ್ನು ಬೋಧಿಸಲಾಯಿತು.

ಮುಖ್ಯ ವಿಚಾರಣೆ ವಾದಿ ಪರ ವಕೀಲರಿಂದಃ-

ನಾನು ಈಗ ಹಾಜರುಪಡಿಸಿದ ಪ್ರಮಾಣ ಪತ್ರವನ್ನು ನನ್ನ ಮುಖ್ಯ ವಿಚಾರಣೆಯನ್ನಾಗಿ ಪರಿಗಣಿಸಲು ಕೋರುತ್ತೇನೆ. ಪ್ರಮಾಣ ಪತ್ರದಲ್ಲಿನ ಎಲ್ಲಾ ಅಂಶಗಳು ಸತ್ಯವಾಗಿವೆ ಮತ್ತು ಅದರಲ್ಲಿ ನನ್ನ ಸಹಿ ಇರುತ್ತದೆ ಎಂದು ಪ್ರಮಾಣೀಕರಿಸುತ್ತೇನೆ.

ದಿನಾಂಕ 19.04.2000 ರಂದು ಆದ ಶುದ್ಧ ಕ್ರಯ ಪತ್ರದ ಅಸಲು ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-1 ಎಂದು, 06.12.2017 ರಂದು ನನ್ನ ತಮ್ಮ ಬರೆದುಕೊಟ್ಟಿರು ಹಕ್ಕು ನಿವೃತ್ತಿ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ-2 ಎಂದು, ಎಂ.ಆರ್.ಹೆಚ್-26/2017-2018 ನ್ನು ಹಾಜರುಪಡಿಸಿದ್ದು ಅದನ್ನು ನಿಪಿ-3 ಎಂದು, ಎಂ.ಆರ್.ಹೆಚ್-102/2017-18 ನ್ನು ಹಾಜರುಪಡಿಸಿದ್ದು ಅದನ್ನು ನಿಪಿ-4 ಎಂದು, ಎಂ.ಆರ್. 11/2000-01 ನ್ನು ಹಾಜರುಪಡಿಸಿದ್ದು ಅದನ್ನು ನಿಪಿ-5 ಎಂದು, ಒಪ್ಪಿಗೆ ಪತ್ರದ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ-6 ಎಂದು, ಒಂದು ಇಸಿ ಅನ್ನು ಹಾಜರುಪಡಿಸಿದ್ದು ಅದನ್ನು ನಿಪಿ-7 ಎಂದು, ಶಿವಮ್ಮನವರ ಮರಣ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ-8 ಎಂದು, ಅಪ್ಪಾಜಯ್ಯರವರ ಮರಣ ಪ್ರಮಾಣಪತ್ರದ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ-9 ಎಂದು, ವಂಶವೃಕ್ಷದ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ-10 ಎಂದು, ಓ.ಎಸ್. 255/2019 ರ ದಾವೆಯ ಆದೇಶ ಪುಟ, ರಾಜಿ ಅರ್ಜಿ, ಅಂತಿಮ ಡಿಕ್ರಿಯ ದೃಢೀಕೃತ ನಕಲುಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಒಟ್ಟಾಗಿ ನಿಪಿ-11 ಎಂದು, ಪಹಣಿ ಪತ್ರಿಕೆಯನ್ನು ಹಾಜರುಪಡಿಸಿದ್ದು

ಅದನ್ನು ನಿಪಿ-12 ಎಂದು ಗುರತಿಸಲಾಯಿತು.

<u>ಪಾಟೀ ಸವಾಲು ಪ್ರತಿವಾದಿ ಪರ ವಕೀಲರಿಂದಃ-</u>

ಹಾಜರಿದ್ದು ಸಮಯ ಕೋರಿದ ಕಾರಣ ಮುಂದೂಡಲಾಯಿತು.

(ಸಾಕ್ಷಿಯು ಕೊಟ್ಟ ಸಾಕ್ಷ್ಯವನ್ನು ಬಹಿರಂಗ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಗಣಕೀಕರಿಸಿದೆ)

(ಸಾಕ್ಷಿಗೆ ಸಾಕ್ಷ್ಯವನ್ನು ಓದಿ ಹೇಳಲಾಗಿ ಕೇಳಿ ಸರಿ ಇದೆ ಎಂದು ಒಪ್ಪಿದ್ದಾರೆ)

(ಮಹೇಶ್ ಬಿ.ಟಿ)
1 ನೇ ಅಪರ ಹಿರಿಯ ಸಿವಿಲ್ ನ್ಯಾಯಾಧೀಶರು,
ರಾಮನಗರ.